# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **2169 (2455)** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿಯರಾದವರು)** |
| **ಉತ್ತರಿಸಬೇಕಾದ ದಿನಾಂಕ** | **27 /03/2026** |
| **ಉತ್ತರಿಸುವವರು** | **ಮಾನ್ಯ ಕಾರ್ಮಿಕ ಸಚಿವರು** |

| **ಕ್ರ. ಸಂ.** | **ಪ್ರಶ್ನೆ** | **ಉತ್ತರ** |
|---|---|---|
| ಅ) | ತುಮಕೂರು ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಡಿ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು: | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆ ಗಳಲ್ಲಿ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸುತ್ತಿದ್ದು, ತುಮಕೂರು ಜಿಲ್ಲೆಗೆ ಸಂಬಂಧಿಸಿದಂತೆ, ನೋಂದಾಯಿತ ಕಾರ್ಮಿಕರ/ ಫಲಾನುಭವಿಗಳ ಸಂಖ್ಯೆ ಈ ಕೆಳಕಂಡಂತಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br><br>ಈ ಮಂಡಳಿಯ ವತಿಯಿಂದ ತುಮಕೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ಮಾಡುವ 85992 ಕಾರ್ಮಿಕರನ್ನು ನೋಂದಣಿ ಮಾಡಲಾಗಿರುತ್ತದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br><br>ಈ ಮಂಡಳಿಯ ವತಿಯಿಂದ ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ, ಈವರೆಗೆ ಕಾರ್ಮಿಕ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದರೆ, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿ ಸುತ್ತಿರುವ ವಿವಿಧ ಯೋಜನೆಗಳಡಿ ನೋಂದಾಯಿತ ರಾದ ತುಮಕೂರು ಜಿಲ್ಲೆಗೆ ಸಂಬಂಧಿಸಿದ ಕಾರ್ಮಿಕರ ವಿವರ ಈ ಕೆಳಕಂಡಂತಿದೆ: |

<table>
<tr><td></td><td></td><td>
<table>
<tr><th>ಕ್ರ. ಸಂ</th><th>ಯೋಜನೆ</th><th>ಕಾರ್ಮಿಕರ ಸಂಖ್ಯೆ</th></tr>
<tr><td>1</td><td>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ (102 ಅಸಂಘಟಿತ ವರ್ಗಗಳ ಕಾರ್ಮಿಕರು)</td><td>117313</td></tr>
<tr><td>2</td><td>ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ</td><td>34404</td></tr>
<tr><td>3</td><td>ಇ-ಶ್ರಮ್ ಕಾರ್ಯಕ್ರಮದಡಿ ನೋಂದಣಿ</td><td>427083</td></tr>
<tr><td>4</td><td>ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ</td><td>809</td></tr>
<tr><td>5</td><td>ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:</td><td>359</td></tr>
</table>
<br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:<br>
ಈ ಮಂಡಳಿಯ ವತಿಯಿಂದ ಕಾರ್ಮಿಕರನ್ನು ನೋಂದಾಯಿಸುವ ವ್ಯವಸ್ಥೆಯಿರುವುದಿಲ್ಲ. ಆದರೆ, ತುಮಕೂರು ಜಿಲ್ಲೆಯಿಂದ 2024-25ನೇ ಸಾಲಿನಲ್ಲಿ 311 ಕೈಗಾರಿಕೆ/ ಫ್ಯಾಕ್ಟರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 46422 ಕಾರ್ಮಿಕರು ರೂ.28,09,721/-ಗಳ ಮೊತ್ತದ ವಂತಿಕೆಯನ್ನು ಮಂಡಳಿಗೆ ಪಾವತಿಸಿರುತ್ತಾರೆ.
</td></tr>
<tr><td>ಆ)</td><td>ತುಮಕೂರು ಜಿಲ್ಲೆ ವ್ಯಾಪ್ತಿಯಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಕೈಗಾರಿಕಾ ಪ್ರದೇಶವಿದ್ದು ಕೆಲಸ ಮಾಡುವ ಕಾರ್ಮಿಕರಿಗೆ ಮಲ್ಟಿಸ್ಪೆಷಾಲಿಟಿ ಇ.ಎಸ್.ಐ ಆಸ್ಪತ್ರೆ ಇಲ್ಲದೆ ಸಾವಿರಾರು ಕಾರ್ಮಿಕರಿಗೆ ಬಹಳ ತೊಂದರೆಯುಂಟಾಗಿ ರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.</td></tr>
<tr><td>ಇ)</td><td>ಬಂದಿದ್ದಲ್ಲಿ, ತಮಕೂರು ಜಿಲ್ಲೆಗೆ ಮಲ್ಟಿಸ್ಪೆಷಾಲಿಟಿ ಇ.ಎಸ್.ಐ ಆಸ್ಪತ್ರೆ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?</td><td>• ರಾಜ್ಯದಲ್ಲಿ ಇ.ಎಸ್ಐ (ESI) ಆಸ್ಪತ್ರೆ ನಿರ್ಮಾಣ ಮತ್ತು ನಿರ್ವಹಣೆ ಕಾರ್ಯವು ಕೇಂದ್ರ ಸರ್ಕಾರದ ಕಾರಾವಿ ನಿಗಮದ ವ್ಯಾಪ್ತಿಗೆ ಒಳಪಡುತ್ತದೆ.<br>• ತುಮಕೂರಿನಲ್ಲಿ 100 ಹಾಸಿಗೆಗಳ ಹೊಸ ಇ.ಎಸ್.ಐ.ಸಿ ಆಸ್ಪತ್ರೆ ಮತ್ತು 32 ಸಿಬ್ಬಂದಿ ವಸತಿ ಗೃಹಗಳನ್ನು ಸ್ಥಾಪಿಸಲು ಇ.ಎಸ್.ಐ.ಸಿ (ESIC HQ), ಕೇಂದ್ರ ಸರ್ಕಾರ ದಿನಾಂಕ:11.07.2022ರ ಪತ್ರದ</td></tr>
</table>

| | | |
|---|---|---|
| | | ಮೂಲಕ ತಾತ್ವಿಕ ಅನುಮೋದನೆಯನ್ನು ನೀಡಿರುತ್ತದೆ. ಈ ಸಂಬಂಧ, ತುಮಕೂರು ನಗರದ ಸಮೀಪದಲ್ಲಿ ಸೂಕ್ತವಾದ 05 ಎಕರೆ ಜಮೀನನ್ನು ಗುರುತಿಸುವಂತೆ ತುಮಕೂರು ಜಿಲ್ಲಾಧಿಕಾರಿಗಳನ್ನು, ಪ್ರಾದೇಶಿಕ ನಿರ್ದೇಶಕರ ಕಛೇರಿ, ಕಾರಾವಿನಿಗಮ, ಕೇಂದ್ರ ಸರ್ಕಾರರವರು ಕೋರಿರುತ್ತಾರೆ.<br>• ಸದರಿ ಕೋರಿಕೆಗೆ ಸ್ಪಂದಿಸಿ, ತುಮಕೂರು ಜಿಲ್ಲಾಧಿಕಾರಿಗಳ ಕಛೇರಿಯು ತುಮಕೂರಿನ ವಸಂತನರಸಾಪುರ ಕೈಗಾರಿಕಾ ಪ್ರದೇಶದಲ್ಲಿ 5.0 ಎಕರೆ ಜಮೀನನ್ನು "100 ಹಾಸಿಗೆಗಳ ಇ.ಎಸ್.ಐ.ಸಿ ಆಸ್ಪತ್ರೆ ಮತ್ತು 32 ಸಿಬ್ಬಂದಿ ವಸತಿ ಗೃಹಗಳ ನಿರ್ಮಾಣ"ಕ್ಕಾಗಿ ಅಂತಿಮ ಗೊಳಿಸಿರುತ್ತದೆ.<br>• ಪ್ರಸ್ತುತ, ಪ್ರಸ್ತಾವಿತ ಜಮೀನು ಸ್ವಾಧೀನಕ್ಕೆ ಸಂಬಂಧಿಸಿದಂತೆ ಇ.ಎಸ್.ಐ.ಸಿ (ESIC HQ) ಕೇಂದ್ರ ಸರ್ಕಾರದ ಅವಲೋಕನದಂತೆ ಸ್ಪಷ್ಟೀಕರಣ ನೀಡುವಂತೆ ಪ್ರಾದೇಶಿಕ ನಿರ್ದೇಶಕರ ಕಛೇರಿ, ಕಾರಾವಿ ನಿಗಮ, ಕೇಂದ್ರ ಸರ್ಕಾರರವರು ದಿನಾಂಕ:18.02.2026ರ ಪತ್ರದ ಮೂಲಕ ತುಮಕೂರು ಜಿಲ್ಲಾಧಿಕಾರಿಗಳನ್ನು ಕೋರಿರುತ್ತಾರೆ. ಜಿಲ್ಲಾಧಿಕಾರಿಗಳ ಕಛೇರಿಯಿಂದ ಉತ್ತರ ಲಭ್ಯವಾದ ನಂತರ, ಜಮೀನು ಸ್ವಾಧೀನ ಪ್ರಕ್ರಿಯೆಯ ಮುಂದಿನ ಕ್ರಮಗಳನ್ನು ಕೇಂದ್ರ ಸರ್ಕಾರದ ಕಾರಾವಿ ನಿಗಮದಿಂದ ಕೈಗೊಳ್ಳಲಾಗುವುದು. |

**ಕಾಇ 161 ಎಲ್‌ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**